ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com
ಇ-ಮೇಲ್ ವಿಳಾಸ :director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

<u>ಓದಲಾಗಿದೆ:</u>

1. ಕವಿಮಂ ನೌಕರರ ವೈದ್ಯಕೀಯ ನಿಯಮಾವಳಿ 1993 ಹಾಗೂ ಕಾಲ ಕಾಲಕ್ಕೆ ಮಂಡಿಸಿರುವ ತಿದ್ದುಪಡಿಗಳು
2. ನಿರ್ಣಯ ಸಂಖ್ಯೆ. ಕವಿಪ್ರನಿನಿ/ಐ.ಎಂ.ಸಿ(ಎ)/4/39/2000-01 ದಿನಾಂಕ 23.11.2000
3. ಕವಿಮಂ ನೌಕರರ ಸಂಘದೊಂದಿಗೆ ನಡೆದ ಜಂಟಿ ಸಭೆ ದಿನಾಂಕ 30.09.2000
4. ನಿಗಮದ ಆದೇಶ ಸಂಖ್ಯೆ: ಬಿ6/1432/2000-01/09.05.2001
5. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ6/1432/2000-01 ದಿನಾಂಕ 11.03.2002
6. ನಿರ್ದೇಶಕರು (ಆ ಮತ್ತು ಮಾ.ಸಂ), ಕವಿಪ್ರನಿನಿ ರವರ ಅನುಮೋದಿತ ಟಿಪ್ಪಣಿ ದಿನಾಂಕ 04.04.2018

<u>ಪ್ರಸ್ತಾವನೆ:</u>

ಕವಿಪ್ರನಿನಿಯು ಮಾರಣಾಂತಿಕ ಕಾಯಿಲೆಗೆ ಸಂಬಂಧಿಸಿದಂತೆ ಚಿಕಿತ್ಸೆ ಪಡೆಯಲು ಕೆಲವು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ6/1432/2000-1 ದಿನಾಂಕ 09.05.2001 ರನ್ವಯ ಮಾನ್ಯ ಮಾಡಲಾಗಿದೆ. ಮೆ: ಶಂಕರ ಕ್ಯಾನ್ಸರ್ ಹಾಸ್ಪಿಟಲ್ ಅಂಡ್ ರಿಸರ್ಚ್ ಸೆಂಟರ್, 1ನೇ ಕ್ರಾಸ್, ಶಂಕರಪುರಂ ಬಸವನಗುಡಿ, ಬೆಂಗಳೂರು, **ಕ್ಯಾನ್ಸರ್ ಕಾಯಿಲೆಗಳ ಚಿಕಿತ್ಸೆಗೆ** ಸಂಬಂಧಪಟ್ಟಂತೆ ಸಾಲದ ಸೌಲಭ್ಯದ (Credit Facilities) ಮೂಲಕ ಚಿಕಿತ್ಸೆ ನೀಡಲು ದಿನಾಂಕ 05.04.2018 ರಂದು ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. ಆದ್ದರಿಂದ ಸದರಿ ಕಾಯಿಲೆಗಳಿಗೆ ಚಿಕಿತ್ಸೆ ನೀಡುವ ಸಂಬಂಧ 3 ವರ್ಷಗಳವರೆಗೆ ಅಂದರೆ ಮೇ 2018 ರಿಂದ ಏಪ್ರಿಲ್ 2021 ರವರೆಗೆ CGHS 2014 ರ ದರಗಳಿಗೆ ಒಪ್ಪಂದ ಮಾಡಿಕೊಳ್ಳಲು ಅನುಮೋದನೆಯಾಗಿರುತ್ತದೆ. ಈ ಬಗ್ಗೆ ಪರಸ್ಪರ ಒಪ್ಪಂದ (MOU ) ಮಾಡಿಕೊಳ್ಳಲು ಮಾನ್ಯ ನಿರ್ದೇಶಕರು (ಆ ಮತ್ತು ಮಾ.ಸಂ.) ರವರ ಟಿಪ್ಪಣಿ ದಿನಾಂಕ 04.04.2018 ರಲ್ಲಿ ಅನುಮೋದನೆಯಾಗಿರುವುದರಿಂದ ಕವಿಪ್ರನಿನಿ ಹಾಗೂ ಮೇಲ್ಕಂಡ ಸದರಿ ಆಸ್ಪತ್ರೆಗಳೊಂದಿಗೆ ನಿಗಮದ ಅಧಿಕಾರಿ/ನೌಕರರು ಮತ್ತು ಅವರ ಅವಲಂಬಿತರು ಸಾಲ ಸೌಲಭ್ಯಗಳ (Credit Facilities) ಮೂಲಕ ಕ್ಯಾನ್ಸರ್ ಕಾಯಿಲೆಯ ಚಿಕಿತ್ಸೆಯನ್ನು ಪಡೆಯಲು ಈ ಆದೇಶ.

**<u>ಆದೇಶ ಸಂಖ್ಯೆ: ಕವಿಪ್ರನಿನಿ/ಬಿ6/1432/2000-01 Vol-08 ಬೆಂಗಳೂರು, ದಿನಾಂಕ:</u>** 22 MAY 2018

1. **ನಿಗಮದ ಆದೇಶ ದಿನಾಂಕ 09.05.2001ರ ಮುಂದುವರೆದ ಭಾಗವಾಗಿ ನಿಗಮವು ಮೆ: ಶಂಕರ ಕ್ಯಾನ್ಸರ್ ಹಾಸ್ಪಿಟಲ್ ಅಂಡ್ ರಿಸರ್ಚ್ ಸೆಂಟರ್, 1ನೇ ಕ್ರಾಸ್, ಶಂಕರಪುರಂ ಬಸವನಗುಡಿ, ಬೆಂಗಳೂರು-560 004, ರವರು ಕ್ಯಾನ್ಸರ್ ಕಾಯಿಲೆಗಳ ಚಿಕಿತ್ಸೆಗೆ ಸಂಬಂಧಪಟ್ಟಂತೆ ಎಲ್ಲಾ ಪ್ರಕಾರಗಳ ಶಸ್ತ್ರ ಚಿಕಿತ್ಸೆ ರಹಿತ ಜೀವ ಉಳಿಸುವ ಚಿಕಿತ್ಸಾ ಕಾರ್ಯ ವಿಧಾನಗಳಿಗೆ ಪೂರ್ಣವಾಗಿ ಹಾಗೂ ನೇರವಾಗಿ ವೈದ್ಯಕೀಯ ವೆಚ್ಚಗಳನ್ನು** CGHS 2014 ರ ದರಗಳಿಗೆ ಸಂಬಂಧಪಟ್ಟಂತೆ ಮತ್ತು ಕ್ಯಾನ್ಸರ್ ಸರ್ಜರಿಯ ಪರಿಷ್ಕೃತ ದಿನಾಂಕ 07.09.2015 ರ ದರಗಳನ್ವಯ ಮೇ 2018 ರಿಂದ ಏಪ್ರಿಲ್ 2021 ರವರೆಗೆ ಸದರಿ ಆಸ್ಪತ್ರೆಯೊಂದಿಗೆ ನಿಗಮದ ಅಧಿಕಾರಿ/ನೌಕರರು ಮತ್ತು ಅವರ ಅವಲಂಬಿತರು ಸಾಲ ಸೌಲಭ್ಯಗಳ ಮೂಲಕ ವೈದ್ಯಕೀಯ ಚಿಕಿತ್ಸೆಯನ್ನು ಪಡೆದು ಮರುಪಾವತಿಸುವಂತೆ ಒಪ್ಪಂದ (MOU ) ವನ್ನು ಮಾಡಿಕೊಳ್ಳಲಾಗಿದೆ.

... 2

**2.** ನಿಗಮದಿಂದ ಆಸ್ಪತ್ರೆಯ ಹುಂಡಿಗಳನ್ನು ನೇರವಾಗಿ ಆಸ್ಪತ್ರೆಗೆ ಪಾವತಿಸುವ ಸಲುವಾಗಿ ವಾರ್ಡ ವೆಚ್ಚಗಳನ್ನು ಈ ಕೆಳಗಿನಂತೆ ನಿರ್ಭಂಧಿಸಲಾಗಿದೆ.

| | |
|---|---|
| ಅಧೀಕ್ಷಕ ಇಂಜಿನಿಯರ್ ಹುದ್ದೆಯ ಅಧಿಕಾರಿಗಳು, ಅದರ ಸಮಾನ ಮತ್ತು ಅದರ ಮೇಲ್ಪಟ್ಟ ಹುದ್ದೆಗಳಿಗೆ. | ಖಾಸಗಿ ವಾರ್ಡ್ |
| ಸಹಾಯಕ ಇಂಜಿನಿಯರ್ ಹುದ್ದೆಯ ಅಧಿಕಾರಿಗಳು, ಅದರ ಸಮಾನ ಮತ್ತು ಅಧೀಕ್ಷಕ ಇಂಜಿನಿಯರ್ ಹುದ್ದೆಯ ಕೆಳಗಿನ ಹುದ್ದೆಗಳಿಗೆ. | ಅರೆ ಖಾಸಗಿ ವಾರ್ಡ್ |
| ಕಿರಿಯ ಇಂಜಿನಿಯರ್ ಹುದ್ದೆಯ ನೌಕರರು, ಅದರ ಸಮಾನ ಮತ್ತು ಅದರ ಕೆಳಗಿನ ಹುದ್ದೆಗಳಿಗೆ. | ಸಾಮಾನ್ಯ ಅಥವಾ ಅದರ ಸಮಾನ ವಾರ್ಡ್ |

**3.** ಈ ಯೋಜನೆಯ ಅಡಿಯಲ್ಲಿ ಪೂರ್ಣ ವೈದ್ಯಕೀಯ ವೆಚ್ಚವನ್ನು ಮರುಪಾವತಿ ಪಡೆಯಲು ಈ ಕೆಳಗಿನ ಮಾರ್ಗ ಸೂಚಿಗಳನ್ನು ಅನುಸರಿಸುವುದು.

a) ಈ ಯೋಜನೆಯ ಅಡಿಯಲ್ಲಿ ಅಧಿಕಾರಿ/ನೌಕರರ ಮತ್ತು ಅವರ ಅವಲಂಬಿತರ ವೈದ್ಯಕೀಯ ಚಿಕಿತ್ಸೆಗಾಗಿ ನಿಗಮವು ಸದರಿ ಆಸ್ಪತ್ರೆಯೊಂದಿಗೆ ಆರ್ಥಿಕ ಒಪ್ಪಂದ ಮಾಡಿ ಕೊಂಡಿದೆ. ಆದ ಕಾರಣ ಆಸ್ಪತ್ರೆಗೆ ದಾಖಲಾಗುವ ಸಮಯದಲ್ಲಿ ಅಥವಾ ಶಸ್ತ್ರ ಚಿಕಿತ್ಸೆಯ ಮುನ್ನವಾಗಲಿ ಯಾವುದೇ ರೀತಿಯ ಮುಂಗಡ ಹಣವನ್ನು ಪಾವತಿಸುವ ಅಗತ್ಯವಿರುವುದಿಲ್ಲ.

b) ರೋಗಿಯು ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ ನಂತರ ಪೂರ್ಣ ವೈದ್ಯಕೀಯ ವೆಚ್ಚದ ಮರುಪಾವತಿಯನ್ನು CGHS 2014 ರ ದರಪಟ್ಟಿ ಪ್ರಕಾರ ನಿಗಮವು ನೇರವಾಗಿ ಆಸ್ಪತ್ರೆಗೆ ಪಾವತಿಸುವುದು. ಆದಾಗ್ಯೂ, ನೌಕರರು ಅರ್ಹವಿರುವ ಕ್ರಮ ಸಂಖ್ಯೆ (2) ರನ್ವಯ ಅನ್ವಯಿಸುವ ವಾರ್ಡನ್ನು ಆಯ್ಕೆ ಮಾಡಿದ್ದಲ್ಲಿ ಅದರಿಂದಾಗುವ ವೆಚ್ಚದ ವ್ಯತ್ಯಾಸದ ಮೊತ್ತವನ್ನು ನೌಕರರೇ ಭರಿಸತಕ್ಕದ್ದು.

c) ನೌಕರರು ಅಥವಾ ಅವರ ಕುಟುಂಬದವರು ಸದರಿ ಆಸ್ಪತ್ರೆಯಲ್ಲಿ **ಕ್ಯಾನ್ಸರ್** ಕಾಯಿಲೆಗಾಗಿ ಚಿಕಿತ್ಸೆ ಪಡೆದಲ್ಲಿ ನೌಕರರು ಭರಿಸುವ ಒಟ್ಟು ವೈದ್ಯಕೀಯ ವೆಚ್ಚವನ್ನು ಅವರ ಅರ್ಹತೆಯ ಮೇರೆಗೆ ಮರುಪಾವತಿಸಲಾಗುವುದು.

d) ವಿಭಾಗಾಧಿಕಾರಿ/ನಿಯಂತ್ರಣಾಧಿಕಾರಿಗಳು ಪಡೆಯಲು ಬಯಸಿರುವ ಚಿಕಿತ್ಸೆಯೂ "ವೈದ್ಯಕೀಯ ನಿಯಮಾವಳಿಯಲ್ಲಿ" ವ್ಯಾಖ್ಯಾನಿಸಿರುವ ಹಾಗೆ ನೌಕರರಿಗೆ ಅಥವಾ ಅವರ ಕುಟುಂಬದ ಸದಸ್ಯರಿಗೆ ಮಾತ್ರ ಅನ್ವಯಿಸಿದೆಯೇ ಎಂಬುದನ್ನು ಖಾತ್ರಿ ಪಡಿಸಿಕೊಂಡು ರೋಗಿಯ ಗುರುತು ಪತ್ರ (Identification) ಮತ್ತು ನೌಕರರೊಂದಿಗೆ ರೋಗಿಯ ಸಂಬಂಧವನ್ನು ಈ ಆದೇಶದೊಂದಿಗೆ ಲಗತ್ತಿಸಿರುವ ನಿಗಧಿತ ನಮೂನೆಯಲ್ಲಿ ನೀಡಿ ಅದರ ಒಂದು ಪ್ರತಿಯನ್ನು ಆಸ್ಪತ್ರೆಗೂ ನೀಡತಕ್ಕದ್ದು.

e) ಈ ಯೋಜನೆಯ ವೈದ್ಯಕೀಯ ಚಿಕಿತ್ಸೆಯು ಕವಿಪ್ರನಿನಿ ಎಲ್ಲಾ ಖಾಯಂ ನೌಕರರಿಗೆ ಅನ್ವಯಿಸುತ್ತದೆ.

f) ವಿಭಾಗಾಧಿಕಾರಿ/ನಿಯಂತ್ರಣಾಧಿಕಾರಿಗಳು ನೀಡುವ ರೋಗಿಯ ಗುರುತು ಪತ್ರವಿದ್ದಲ್ಲಿ ಮಾತ್ರ ನಿರ್ದೇಶಕರು (ಆ ಮತ್ತು ಮಾ.ಸಂ) ರವರು ರೆಫೆರಲ್ ಪತ್ರವನ್ನು ನೀಡುವರು.

g) ಆಸ್ಪತ್ರೆಗೆ ನೀಡುವ ರೆಫರಲ್ ಪತ್ರವನ್ನು ನಿರ್ದೇಶಕರು (ಆ ಮತ್ತು ಮಾ.ಸಂ), ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು ರವರ ಮಾತ್ರ ಸಹಿ ಮಾಡತಕ್ಕದ್ದು. ಬೇರೆ ಯಾವ ಅಧಿಕಾರಿಗಳಿಗೂ ರೆಫರಲ್ ಪತ್ರ ಸಹಿ ಮಾಡುವ ಅಧಿಕಾರವಿರುವುದಿಲ್ಲ.

h) ಅಧಿಕಾರಿ/ನೌಕರರು ಮತ್ತು ಅವರ ಅವಲಂಬಿತರು ಆಸ್ಪತ್ರೆಗೆ ದಾಖಲಾಗುವ ಮುನ್ನ ನಿಗಮ ಕಛೇರಿಯಿಂದ ಅನುಮೋದಿಸಲ್ಪಟ್ಟ, ನಿರ್ದೇಶಕರು (ಆ ಮತ್ತು ಮಾ.ಸಂ), ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು-09 ರವರಿಂದ ಸಹಿಯಾದ ರೆಫರಲ್ ಪತ್ರವನ್ನು ಪಡೆಯತಕ್ಕದ್ದು

ನಿರ್ದೇಶಕರು (ಆ ಮತ್ತು ಮಾ.ಸಂ.)
ಕವಿಪ್ರನಿನಿ

ಪ್ರತಿಗಳು:

1. ವ್ಯವಸ್ಥಾಪಕ ನಿರ್ದೇಶಕರು, ಪಿ.ಸಿ.ಕೆ.ಎಲ್., ಕಾವೇರಿಭವನ, ಬೆಂಗಳೂರು.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.,
3. ಎಲ್ಲಾ ಮುಖ್ಯ ಇಂಜನಿಯರ್ (ವಿ) ಕವಿಪ್ರನಿನಿ.,
4. ಎಲ್ಲಾ ಅಧೀಕ್ಷಕ ಇಂಜನಿಯರ್ (ವಿ)/ನಿಯಂತ್ರಣಾಧಿಕಾರಿಗಳು,
5. ಎಲ್ಲಾ ಕಾರ್ಯ ನಿರ್ವಾಹಕ ಇಂಜನಿಯರ್ (ವಿ)/ ಉಪ ಲೆಕ್ಕಾ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.,
6. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಪ್ರಸರಣ)/(ಆ ಮತ್ತು ಮಾ.ಸಂ.)/ನಿರ್ದೇಶಕರು ಮತ್ತು ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ ಇವರುಗಳ ಆಪ್ತ ಕಾರ್ಯದರ್ಶಿಗಳು ಹಾಗೂ ಆಪ್ತ ಕಾರ್ಯದರ್ಶಿಗಳು
7. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಎಲ್ಲಾ ಲೆಕ್ಕಾಧಿಕಾರಿಗಳು (ಆಂ.ಪ), ಕವಿಪ್ರನಿನಿ
8. **ಮೆ: ಶಂಕರ ಕ್ಯಾನ್ಸರ್ ಹಾಸ್ಪಿಟಲ್ ಅಂಡ್ ರಿಸರ್ಚ್ ಸೆಂಟರ್, 1ನೇ ಕ್ರಾಸ್, ಶಂಕರಪುರಂ ಬಸವನಗುಡಿ, ಬೆಂಗಳೂರು-560 004, ಫೋ: 080-26981100, 26981101, 26981000**
9. ಲೆಕ್ಕಾಧಿಕಾರಿ, ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com->eprasarana ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.**

ಪ್ರತಿಗಳು ಮಾಹಿತಿಗಾಗಿ:

10. ಶ್ರೀ ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ, ಬೆಂಗಳೂರು ಹಾಗೂ ನಿರ್ದೇಶಕರು, ಕವಿಪ್ರನಿನಿ.ಎಸ್ಕಾಂ.
11. ಶ್ರೀ ಎ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ, ಎಸ್ಕಾಂ
12. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ ಬೆಂಗಳೂರು.
13. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜನಿಯರುಗಳ ಸಂಘ, ಬೆಂಗಳೂರು.
14. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ ಬೆಂಗಳೂರು.
15. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
16. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜನಿಯರುಗಳ ಸಂಘ, ಬೆಂಗಳೂರು.
17. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ ಮತ್ತು ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.